# ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀಮತಿ ಹೇಮಲತಾ ನಾಯಕ್ ಹಾಗೂ ಶ್ರೀ. ಕೇಶವ ಪ್ರಸಾದ್ ಎಸ್., ಇವರ ನಿಯಮ 330ರ ಗಮನ ಸೆಳೆಯುವ ಸೂಚನೆಗೆ ಉತ್ತರ

## ಸೂಚನೆ:

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣಕ್ಕಾಗಿ 2023-24 ಮತ್ತು 2024-25ನೇ ಸಾಲಿನಲ್ಲಿ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆಯಡಿ ಮೀಸಲಿಟ್ಟ ಅನುದಾನವನ್ನು ರಾಜ್ಯ ಸರ್ಕಾರವು ವಿವಿಧ ಯೋಜನೆಗಳ ಅನುಷ್ಠಾನಕ್ಕಾಗಿ ಬಳಕೆ ಮಾಡಿಕೊಳ್ಳಲು ಉದ್ದೇಶಿಸಿರುವುದರಿಂದ ದಲಿತರಿಗೆ ಅನ್ಯಾಯ ಮಾಡಿದಂತಾಗುತ್ತದೆ. ಪರಿಶಿಷ್ಟರ ಕಲ್ಯಾಣಕ್ಕಾಗಿ ಮೀಸಲಿಟ್ಟ ಹಣವನ್ನು ಅನ್ಯ ಉದ್ದೇಶಕ್ಕಾಗಿ ಬಳಸುವುದು ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆಯನ್ನು ದುರ್ಬಳಕೆ ಮಾಡಿದಂತಾಗಿ, ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಕಾಯ್ದೆಯ ಉಲ್ಲಂಘನೆಯಾಗಿರುತ್ತದೆ. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಶ್ರೇಯೋಭಿವೃದ್ಧಿಗೆ ಬಳಕೆ ಮಾಡಬೇಕಾದ ಅನುದಾನಕ್ಕೆ ಕೊಕ್ಕೆ ಹಾಕಿ ಸರ್ಕಾರದ ವಿವಿಧ ಯೋಜನೆಗಳಿಗೆ ಅನುದಾನವನ್ನು ಬಳಕೆ ಮಾಡುವುದರಿಂದ ತಳಸಮುದಾಯಗಳ ಅಭಿವೃದ್ಧಿಗೆ ಹಿನ್ನಡೆಯಾಗುತ್ತದೆ. ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆಯಡಿ ಮೀಸಲಿಟ್ಟ ಅನುದಾನವನ್ನು ಯಾವುದಕ್ಕೂ ವರ್ಗಾವಣೆ ಮಾಡುವುದಿಲ್ಲ ಎಂದು ಆಶ್ವಾಸನೆ ನೀಡಿದ ಸರ್ಕಾರ 2023-24 ಮತ್ತು 2024-25ನೇ ಸಾಲಿನಲ್ಲಿ ಒಟ್ಟು 25 ಸಾವಿರ ಕೋಟಿಗಳಿಗೂ ಅಧಿಕ ಮೊತ್ತವನ್ನು ವಿವಿಧ ಯೋಜನೆಗಳ ಅನುಷ್ಠಾನಕ್ಕೆ ವರ್ಗಾವಣೆ ಮಾಡಿರುವುದರಿಂದ ದಲಿತರ ಶ್ರೇಯೋಭಿವೃದ್ಧಿಗೆ ಹಿನ್ನಡೆಯಾಗುತ್ತದೆ. ಅನ್ಯ ಉದ್ದೇಶಕ್ಕೆ ಮತ್ತು ವಿವಿಧ ಯೋಜನೆಗಳ ಅನುಷ್ಠಾನಕ್ಕೆ ಬಳಕೆ ಮಾಡಿರುವ ಹಣವನ್ನು ಮತ್ತೆ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆಯಲ್ಲಿ ವಿನಿಯೋಗ ಮಾಡಲು ಸರ್ಕಾರವು ಕ್ರಮ ತೆಗೆದುಕೊಳ್ಳುವಂತೆ ಮತ್ತು ತಳಸಮುದಾಯಗಳಿಗೆ ಅನ್ಯಾಯವಾಗದಂತೆ ಸೂಕ್ತ ಕ್ರಮವಹಿಸುವ ನಿಟ್ಟಿನಲ್ಲಿ ಸದನದಲ್ಲಿ ಈ ವಿಷಯವನ್ನು ಪ್ರಸ್ತಾಪಿಸಬಯಸುತ್ತೇನೆ.

## ಉತ್ತರ

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಜನಸಂಖ್ಯೆಗೆ ಅನುಗುಣವಾಗಿ ಅಭಿವೃದ್ಧಿ ಆಯವ್ಯಯದಲ್ಲಿ ಅನುದಾನ ಮೀಸಲಿಡಲು ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಕಾಯ್ದೆ 2013 ಅನ್ನು 2014-15ನೇ ಸಾಲಿನಿಂದ ಜಾರಿಗೆ ತರಲಾಗಿದೆ.

2011ರ ಜನಗಣತಿಯ ಪ್ರಕಾರ ಪರಿಶಿಷ್ಟ ಜಾತಿಯವರ ಜನಸಂಖ್ಯೆ 17.15% ಮತ್ತು ಪರಿಶಿಷ್ಟ ಪಂಗಡದವರ ಜನಸಂಖ್ಯೆ 6.95% ಇದ್ದು, ಒಟ್ಟು 24.10% ಆಗುತ್ತದೆ. ಇದರನ್ವಯ ಪ್ರತಿ ವರ್ಷ ಅಭಿವೃದ್ಧಿ ಆಯವ್ಯಯದಲ್ಲಿ 24.10% ಅನುದಾನವನ್ನು ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅಡಿ ಹಂಚಿಕೆ ಮಾಡಲಾಗುತ್ತದೆ. 2023-24ನೇ ಸಾಲಿನಲ್ಲಿ ಎಸ್.ಸಿ.ಎಸ್.ಪಿ ಅಡಿ ರೂ.25,163.71 ಕೋಟಿ ಮತ್ತು ಟಿ.ಎಸ್.ಪಿ ಅಡಿ ರೂ.10,058.13 ಕೋಟಿ, ಒಟ್ಟು ರೂ.35,221.84 ಕೋಟಿ ಅನುದಾನ ಒದಗಿಸಲಾಗಿದೆ. ಅದೇ ರೀತಿ 2024-25ನೇ ಸಾಲಿನಲ್ಲಿ ಎಸ್.ಸಿ.ಎಸ್.ಪಿ ಅಡಿ ರೂ.27,673.96 ಕೋಟಿ ಮತ್ತು ಟಿ.ಎಸ್.ಪಿ ಅಡಿ ರೂ.11,447.50 ಕೋಟಿ, ಒಟ್ಟು ರೂ.39,121.46 ಕೋಟಿ ಅನುದಾನ ಒದಗಿಸಲಾಗಿದೆ.

ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅಧಿನಿಯಮ 2013 ರಲ್ಲಿ ಕಲಂ 2(ಸಿ) ಅಡಿ ಸಾಮಾನ್ಯ ಸ್ಕೀಮ್ ಗಳು ಅಂದರೆ, "ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳನ್ನು ಒಳಗೊಂಡಂತೆ ಎಲ್ಲಾ ಸಾಮಾಜಿಕ ಸಮುದಾಯಗಳಿಗೆ ಪ್ರಯೋಜನವಾಗುವಂತಹ ಇಲಾಖೆಗಳ ವಾರ್ಷಿಕ ಯೋಜನೆಗಳಲ್ಲಿ ಒಳಗೊಂಡಿರುವ ಸ್ಕೀಮ್‌ಗಳು" ಎಂದು ಇರುತ್ತದೆ. ಸದರಿ ಕಾಯ್ದೆಯ ಕಲಂ 7(ಸಿ) ಯಡಿ ``ಸಾಮಾನ್ಯ ಸಾಮಾಜಿಕ ವಲಯದ ಸ್ಕೀಮುಗಳಿಗೆ ಅನುಸೂಚಿತ ಜಾತಿಗಳು ಅಥವಾ ಅನುಸೂಚಿತ ಪಂಗಡದ ವ್ಯಕ್ತಿಗಳಿಗೆ ಅಥವಾ ಅನುಸೂಚಿತ ಜಾತಿಗಳು ಅಥವಾ ಅನುಸೂಚಿತ ಪಂಗಡದ ಕುಟುಂಬಗಳಿಗೆ, ಇತರರ ಜೊತೆಯಲ್ಲಿ ಪ್ರಯೋಜನವಾಗುವಂತಿದ್ದರೆ, ಸ್ಕೀಮಿನ ವೆಚ್ಚವನ್ನು, ಎಸ್.ಸಿ/ಎಸ್.ಟಿ ಜನ ಸಂಖ್ಯೆಯ ಪ್ರಮಾಣಕ್ಕನುಗುಣವಾಗಿ ಎಸ್.ಸಿ.ಎಸ್.ಪಿ/ ಟಿ.ಎಸ್.ಪಿ ಅಡಿಯಲ್ಲಿ ಹಂಚಿಕೆ ಮಾಡಲು ಅವಕಾಶ ಕಲ್ಪಿಸಲಾಗಿದೆ.

ಅದರಂತೆ, ಸದರಿ ಸೆಕ್ಷನ್ 7(ಸಿ) ಪ್ರಕಾರ ಕಾಯ್ದೆಯ ಅನುಷ್ಠಾನದ ಪ್ರಾರಂಭದಿಂದಲೂ ಶಾಲಾ ಶಿಕ್ಷಣ, ಉನ್ನತ ಶಿಕ್ಷಣ, ಆರೋಗ್ಯ, ವೈದ್ಯಕೀಯ ಶಿಕ್ಷಣ, ಕೃಷಿ, ತೋಟಗಾರಿಕೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಆರ್.ಡಿ.ಪಿ.ಆರ್, ಇಂಧನ, ಪಶು ಸಂಗೋಪನೆ, ಮೀನುಗಾರಿಕೆ, ರೇಷ್ಮೆ, ಕೌಶಲ್ಯಾಭಿವೃದ್ಧಿ ಇತ್ಯಾದಿ ಇಲಾಖೆಗಳಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಜನರು ಒಳಗೊಂಡಂತೆ ಎಲ್ಲರಿಗೂ ಪ್ರಯೋಜನವಾಗುವ ಸಾಮಾನ್ಯ ಯೋಜನೆಗಳಿಗೆ ಎಸ್.ಸಿ.ಎಸ್.ಪಿ/ ಟಿ.ಎಸ್.ಪಿ ಅನುದಾನವನ್ನು ಎಸ್.ಸಿ/ಎಸ್.ಟಿ ಜನರಿಗೆ ಮಾತ್ರ ವಿನಿಯೋಗಿಸಲು ಹಂಚಿಕೆ ಮಾಡಲಾಗುತ್ತಿದೆ.

ಇತರ ರಾಜ್ಯಗಳಲ್ಲಿ ಸಹ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಕಾಯ್ದೆ/ಮಾರ್ಗಸೂಚಿಗಳನ್ವಯ ಅನುದಾನವನ್ನು ವಿವಿಧ ಅಭಿವೃದ್ಧಿ ಇಲಾಖೆಗಳ ಸಾಮಾನ್ಯ ಕಾರ್ಯಕ್ರಮಗಳಡಿ ಎಸ್.ಸಿ/ಎಸ್.ಟಿ ಜನರಿಗೆ ಉಪಯೋಗಿಸಲು ಭಾಗಶಃ ಅನುದಾನವನ್ನು ಎಸ್.ಸಿ.ಎಸ್.ಪಿ/ ಟಿ.ಎಸ್.ಪಿ ಅಡಿ ಹಂಚಿಕೆ ಮಾಡಲಾಗುತ್ತಿದೆ.

ಭಾರತ ಸರ್ಕಾರದಲ್ಲಿಯೂ ಸಹ SCSP/TSP ಕಾರ್ಯಕ್ರಮಗಳನ್ನು DAPSC (Development Action Plan for SC) ಮತ್ತು DAPST (Development Action Plan for ST) ಎಂದು ಕರೆಯಲಾಗುತ್ತಿದ್ದು, ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಭಾಗಶಃ ಅನುದಾನವನ್ನು ವಿವಿಧ ಇಲಾಖೆಗಳ ಸಾಮಾನ್ಯ ಯೋಜನೆಗಳಿಗೂ ಹಂಚಿಕೆ ಮಾಡಿ ಅನುಷ್ಠಾನಗೊಳಿಸಲಾಗುತ್ತಿದೆ.

ಭಾರತ ಸರ್ಕಾರದ ನೀತಿ ಆಯೋಗದ ಮಾರ್ಗಸೂಚಿಗಳಂತೆ ಎಸ್.ಸಿ.ಎಸ್.ಪಿ/ ಟಿ.ಎಸ್.ಪಿ ಅನುದಾನವನ್ನು ವಿವಿಧ ಇಲಾಖೆಗಳ ಸಾಮಾನ್ಯ ಯೋಜನೆಗಳಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರಿಗೆ ಶೇಕಡವಾರು ಅನುದಾನವನ್ನು ಹಂಚಿಕೆ ಮಾಡಲು ತಿಳಿಸಲಾಗಿರುತ್ತದೆ.

ಸರ್ಕಾರದ ಗ್ಯಾರಂಟಿ ಯೋಜನೆಗಳು ಎಲ್ಲಾ ಸಮುದಾಯದವರಿಗೂ ಪ್ರಯೋಜನವಾಗುವ ಸಾಮಾನ್ಯ ಯೋಜನೆಗಳಾಗಿದ್ದು, ಎಸ್.ಸಿ.ಎಸ್.ಪಿ/ ಟಿ.ಎಸ್.ಪಿ ಅಡಿ ಎಸ್.ಸಿ/ ಎಸ್.ಟಿ ಜನರಿಗೆ ಮಾತ್ರ ವಿನಿಯೋಗಿಸಲು ಭಾಗಶಃ ಅನುದಾನ ಹಂಚಿಕೆ ಮಾಡಲಾಗಿದೆ. ಆದ್ದರಿಂದ, ಗ್ಯಾರಂಟಿ ಯೋಜನೆಗಳಿಗೆ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅಡಿ ನೀಡಿರುವ ಅನುದಾನವನ್ನು ಅನ್ಯ ಉದ್ದೇಶಕ್ಕೆ ಹಂಚಿಕೆ ಮಾಡಿರುವುದಿಲ್ಲ. 05 ಗ್ಯಾರಂಟಿ ಯೋಜನೆಗಳಿಗೆ 2023-24ನೇ ಸಾಲಿನಲ್ಲಿ ಎಸ್.ಸಿ.ಎಸ್.ಪಿ ಅಡಿ ರೂ.7,099.61 ಕೋಟಿ ಮತ್ತು ಟಿ.ಎಸ್.ಪಿ ಅಡಿ ರೂ.3,188.02 ಕೋಟಿ ವೆಚ್ಚ ಮಾಡಲಾಗಿದೆ. ಇತರರಿಗೆ ಸಾಮಾನ್ಯ ಅನುದಾನದಲ್ಲಿ ರೂ.29,858.68 ಕೋಟಿ ಅನುದಾನ ಹಂಚಿಕೆ ಮಾಡಲಾಗಿದೆ.

---3

2024-25ನೇ ಸಾಲಿನಲ್ಲಿ ಗ್ಯಾರಂಟಿ ಯೋಜನೆಗಳಿಗೆ ಎಸ್.ಸಿ.ಎಸ್.ಪಿ ಅಡಿ ರೂ.9,980.66 ಕೋಟಿ ಮತ್ತು ಟಿ.ಎಸ್.ಪಿ ಅಡಿ ರೂ.4,301.72 ಕೋಟಿ ಹಂಚಿಕೆ ಮಾಡಲಾಗಿದೆ. ಇತರರಿಗೆ ಸಾಮಾನ್ಯ ಆಯವ್ಯಯದಲ್ಲಿ ರೂ.37,727.02 ಕೋಟಿ ಅನುದಾನ ಒದಗಿಸಲಾಗಿದೆ.

ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅನುದಾನವನ್ನು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಜನರಿಗೆ ಮಾತ್ರ ವಿನಿಯೋಗಿಸುತ್ತಿರುವ ಕಾರಣ ಈ ಅನುದಾನವನ್ನು ಅನ್ಯ ಉದ್ದೇಶಕ್ಕೆ ಹಂಚಿಕೆ ಮಾಡಿರುವುದಿಲ್ಲ.

2014-15ನೇ ಸಾಲಿನಿಂದ 2022-23ನೇ ಸಾಲಿನವರೆಗೆ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಕಾಯ್ದೆ 2013ರ ಸೆಕ್ಷನ್ 7(ಡಿ) ಅಡಿಯಲ್ಲಿ ವಿಭಜಿಸಲಾಗದ ಮೂಲಭೂತ ಸೌಕರ್ಯ ಕಾಮಗಾರಿಗಳಿಗೆ ಅನುದಾನವನ್ನು ನೀಡಲಾಗುತ್ತಿತ್ತು. ಈ ಅನುದಾನವನ್ನು ಡೀಮ್ಡ್ ವೆಚ್ಚವೆಂದು ಭಾವಿಸಲಾಗುತ್ತಿತ್ತು. ಆದರೆ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದವರ ಅಭಿವೃದ್ಧಿಯ ಹಿತದೃಷ್ಟಿಯಿಂದ, 2023-24ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿರುವಂತೆ, ಎಸ್.ಸಿ.ಎಸ್.ಪಿ/ ಟಿ.ಎಸ್.ಪಿ ಕಾಯ್ದೆ 2013ರ ಸೆಕ್ಷನ್ 7(ಡಿ) ಯನ್ನು 2023 ರಲ್ಲಿ ರದ್ದುಪಡಿಸಿ ಕಾಯ್ದೆಗೆ ತಿದ್ದುಪಡಿ ತರಲಾಗಿದೆ. ಇದರಿಂದ ಫಲಾನುಭವಿ ಆಧಾರಿತ ಕಾರ್ಯಕ್ರಮಗಳಿಗೆ ಹೆಚ್ಚಿನ ಅನುದಾನ ಲಭ್ಯವಾಗುತ್ತಿದೆ.

**ಸಕಇ 542 ಎಸ್‌ಎಲ್‌ಪಿ 2024**

**(ಡಾ: ಹೆಚ್.ಸಿ.ಮಹದೇವಪ್ಪ)**
**ಸಮಾಜ ಕಲ್ಯಾಣ ಸಚಿವರು**